**ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ. ಟಿ ನಾರಾಯಣಸ್ವಾಮಿ ಮತ್ತು ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಸಿ.ಟಿ ರವಿ, ಶ್ರೀ ಸುನೀಲ್ ವಲ್ಲಾಪುರೆ, ಶ್ರೀ ಎನ್.ರವಿಕುಮಾರ್. ಶ್ರೀ ಶಾಂತಾರಾಮ್ ಸಿದ್ದಿ, ಶ್ರೀ ಎಸ್.ಎಲ್ ಭೋಜೆಗೌಡ, ಶ್ರೀ ಕೆ.ಎಸ್ ನವೀನ್, ಶ್ರೀ ಕೇಶವ್ ಪ್ರಸಾದ್ ಎಸ್. ಮತ್ತು ಶ್ರೀಮತಿ ಹೇಮಲತಾ ಪಿ. ನಾಯಕ್ ಇವರು ಸಲ್ಲಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:**

ಪರಿಶಿಷ್ಟ ಜಾತಿಯ ಅಡಿಯಲ್ಲಿ ಬರುವ ಎಡಗೈ, ಬಲಗೈ ಆದಿ ಕರ್ನಾಟಕ, ಭೋವಿ, ಲಂಬಾಣಿ, ಕೊರಮ, ಕೊರಚ ಸೇರಿದಂತೆ ಇತರ ವಿವಿಧ ಜಾತಿಯ ಸಮುದಾಯಗಳು ಹಾಗೂ ಹಲವು ಸಂಘಟನೆಗಳು ಒಳ ಮೀಸಲಾತಿಯಲ್ಲಿ ನ್ಯಾಯ ಒದಗಿಸುವಂತೆ ಈಗಾಗಲೇ ರಾಜ್ಯದ್ಯಾಂತ ಬೀದಿ-ಬೀದಿಗಳಲ್ಲಿ ಬೃಹತ್ ಪ್ರತಿಭಟನೆಯನ್ನು ಮತ್ತು ತೀವ್ರತರವಾದ ಚಳುವಳಿಗಳನ್ನು ನಡೆಸುತ್ತಿದ್ದಾರೆ. ಆದ್ದರಿಂದ ಒಳ ಮೀಸಲಾತಿ ಕಲ್ಪಿಸಿ ತಳ ಸಮುದಾಯಗಳಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಒಳಮೀಸಲಾತಿಯ ಅನುಷ್ಠಾನದ ಬಗ್ಗೆ ನಿಲುವನ್ನು ಸ್ಪಷ್ಟಪಡಿಸುವಂತೆ ಕೋರಿರುವುದು.

**ಉತ್ತರ:**

ಕರ್ನಾಟಕ ರಾಜ್ಯದಲ್ಲಿ ಶಿಕ್ಷಣ ಮತ್ತು ಉದ್ಯೋಗದಲ್ಲಿ ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಕಲ್ಪಿಸುವ ಬಗ್ಗೆ ನಿವೃತ್ತ ನ್ಯಾಯಧೀಶರಾದ ಶ್ರೀ ಹೆಚ್.ಎನ್. ನಾಗಮೋಹನ್ ದಾಸ್ ಇವರ ಅಧ್ಯಕ್ಷತೆಯಲ್ಲಿ ಏಕಸದಸ್ಯ ಆಯೋಗವನ್ನು ರಚಿಸಲಾಗಿದೆ. ಸದರಿ ಆಯೋಗವು ದಿನಾಂಕ:04.08.2025 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತದೆ. ಸದರಿ ವರದಿಯು ಸರ್ಕಾರದ ಪರಿಶೀಲನೆಯಲ್ಲಿದೆ.

**ಸಂಖ್ಯೆ: SWD/474/SLP/2025**

**(ಡಾ||ಹೆಚ್.ಸಿ.ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು.